ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆಗಳು

ಅಧ್ಯಕ್ಷರು.—ಪ್ರಸ್ತಾವ ಹೀಗಿದೆ : "ಮೊದಲನೇ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಅಂಗವಾಗಿರಬೇಕು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು. ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆಗಳು

ವಿಧೇಯಕದ ಅಂಗವಾದವು

ಅಧ್ಯಕ್ಷರು.—ಮಾನ್ಯ ಸಚಿವರು ಈಗ ವಿಧೇಯಕವನ್ನು ಮಂಡಿಸಬೇಕು.

ಅಂಗೀಕಾರ ಪ್ರಸ್ತಾವನೆ

ಶ್ರೀ ಎಂ. ರಾಜಶೇಖರ ಮೂರ್ತಿ.—ಮಾನ್ಯ ಅಧ್ಯಕ್ಷರೆ, ೧೯೯೦ನೇ ಇಸವಿಯ ಕರ್ನಾಟಕ ರಾಜ್ಯದ ಧನವಿನಿಯೋಗಕ್ಕೆ ಸಂಬಂಧಿಸಿದ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ "೧೯೯೦ನೇ ಇಸವಿಯ ಕರ್ನಾಟಕ ರಾಜ್ಯದ ಧನವಿನಿಯೋಗಕ್ಕೆ ಸಂಬಂಧಿಸಿದ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು. ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು

ಅಧ್ಯಕ್ಷರು.—ಮಾನ್ಯ ಸಚಿವರು ವಿಧೇಯಕಗಳನ್ನು ಮಂಡಿಸಬಹುದು.

(2) .....

ಶ್ರೀ ಎಂ. ರಾಜಶೇಖರಮೂರ್ತಿ (ಹಣಕಾಸಿನ ಸಚಿವರು).—ಮಾನ್ಯ ಅಧ್ಯಕ್ಷರೆ, ಈ ಕೆಳಕಂಡ ವಿಧೇಯಕಗಳನ್ನು ಮಂಡಿಸಲು ಇಚ್ಛಿಪಡುತ್ತೇನೆ.

೧ ೧೯೯೦ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯಪಹಾರಗಳು, ಕಸಬುಗಳು ಮತ್ತು ಉದ್ಯೋಗಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

೨ ೧೯೯೦ನೇ ಇಸವಿಯ ಕರ್ನಾಟಕ ಕೃಷಿ ವರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

೩ ೧೯೯೦ನೇ ಇಸವಿಯ ಕರ್ನಾಟಕ ಪುನರಂಜನಾ (ತಿದ್ದುಪಡಿ) ತೆರಿಗೆ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

೪ ೧೯೯೦ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಶ್ರೀ ಪಿ. ಜಿ. ಆರ್. ಸಿಂಧ್ಯಾ.—ಎಲ್ಲಾ ಒಟ್ಟಿಗೆ ಮಂಡಿಸುತ್ತಿದ್ದಾರೆ. ಒಂದೊಂದಾಗಿ ಮಂಡಿಸಬೇಕು.

ಅಧ್ಯಕ್ಷರು.—ಒಂದೊಂದಾಗಿ ಹೇಳಬೇಕು.

ಶ್ರೀ ಪಿ.ಜಿ.ಆರ್. ಸಿಂಧ್ಯಾ.—ಇದು ಬರೀ ಇಂಟ್ರೊಡಕ್ಷನ್ನಾ ?

ಅಧ್ಯಕ್ಷರು.—ಹೌದು. ಅದಕ್ಕೇ ಇಷ್ಟು ಎಲಾಬರೇಟಾಗಿದೆ.

SRI M. RAJASHEKARA MURTHY.—The rule does not come in the way to put all the Bills.

೧೯೯೦ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು, ಕಸಬುಗಳು ಮತ್ತು ಉದ್ಯೋಗಗಳ (ತಿದ್ದುಪಡಿ) ವಿಧೇಯಕ.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ರಾಜಶೇಖರ ಮೂರ್ತಿ.—೧೯೯೦ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು, ಕಸಬುಗಳು ಮತ್ತು ಉದ್ಯೋಗಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಹೀಗಿದೆ :

"೧೯೯೦ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು, ಕಸಬುಗಳು ಮತ್ತು ಉದ್ಯೋಗಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕೃತವಾಯಿತು. ಮಂಡಿಸಲು ಅನುಮತಿ ನೀಡಲಾಯಿತು.

ಅಧ್ಯಕ್ಷರು.—ಈಗ ಮಾನ್ಯ ಮಂತ್ರಿಗಳು ವಿಧೇಯಕವನ್ನು ಮಂಡಿಸಬಹುದು.

ಶ್ರೀ ಎಂ. ರಾಜಶೇಖರ ಮೂರ್ತಿ.—ಅಧ್ಯಕ್ಷರೆ, ೧೯೯೦ನೇ ಇಸವಿಯ ಕರ್ನಾಟಕ ವೃತ್ತಿಗಳು, ವ್ಯವಹಾರಗಳು, ಕಸಬುಗಳು ಮತ್ತು ಉದ್ಯೋಗಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲಾಗಿದೆ.*

೧೯೯೦ನೇ ಇಸವಿಯ ಕರ್ನಾಟಕ ಕೃಷಿ ಪರಮಾನ ತೆರಿಗೆ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ರಾಜಶೇಖರ ಮೂರ್ತಿ.—೧೯೯೦ನೇ ಇಸವಿಯ ಕರ್ನಾಟಕ ಕೃಷಿ ಪರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾಪ ಹೀಗಿದೆ :

"೧೯೯೦ನೇ ಇಸವಿಯ ಕರ್ನಾಟಕ ಕೃಷಿ ಪರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು. ವಿಧೇಯಕವನ್ನು ಮಂಡಿಸಲು ಅನುಮತಿ ನೀಡಲಾಯಿತು.

ಅಧ್ಯಕ್ಷರು.—ಈಗ ಮಾನ್ಯ ಮಂತ್ರಿಗಳು ವಿಧೇಯಕವನ್ನು ಮಂಡಿಸಬಹುದು.

ಶ್ರೀ ಎಂ. ರಾಜಶೇಖರ ಮೂರ್ತಿ.—ಅಧ್ಯಕ್ಷರೆ, ೧೯೯೦ನೇ ಇಸವಿಯ ಕರ್ನಾಟಕ ಕೃಷಿ ಪರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಸಭೆಯ ಮುಂದಿಡಲಾಗಿದೆ.*

೧೯೯೦ ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ರಾಜಶೇಖರ ಮೂರ್ತಿ.—(ಹಣಕಾಸು ಸಚಿವರು) ಮಾನ್ಯ ಅಧ್ಯಕ್ಷರೇ, ೧೯೯೦ ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು, ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾಪ ಏನೆಂದರೆ "೧೯೯೦ ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

---

* Annexure.